ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ಸಂಪುಟ ೧೬೦ Volume 160	ಬೆಂಗಳೂರು, ಮಂಗಳವಾರ ೨೫, ನವೆಂಬರ್, ೨೦೨೫ (ಮಾರ್ಗಶಿರಾ , ೦೪, ಶಕವರ್ಷ, ೧೯೪೭) BENGALURU, TUESDAY 25, NOVEMBER, 2025 (MARGASHIRA , 04, SHAKAVARSHA, 1947)	ಸಂಚಿಕೆ ೨೨೩ Issue 223

ಭಾಗ ೩
ಸರ್ಕಾರದ ಆಯಾ ಇಲಾಖೆಗಳ ಮುಖ್ಯಸ್ಥರ ಮತ್ತು ಸ್ಥಳೀಯ ಪ್ರಾಧಿಕಾರಿಗಳಿಗೆ ಸಂಬಂಧಿಸಿದ ಅಧಿಸೂಚನೆಗಳು

ಕರ್ನಾಟಕ ಸರ್ಕಾರ

ಸಂಖ್ಯೆ:RD-LGB/311/2023
(E-1245565)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಡಾ.ಬಿ.ಆರ್. ಅಂಬೇಡ್ಕರ್ ವೀದಿ
ಬೆಂಗಳೂರು, ದಿನಾಂಕ: 10.09.2025

ನಮೂನೆ 27
68(1)ನೇಯ ಪ್ರಕರಣ ನಿಯಮ 94 ರನ್ವಯ ಘೋಷಣೆ

ಸರ್ಕಾರದ ಸ್ವತ್ತಾಗಿರುವ ಹಾಗೂ ಈ ಕೆಳಗಿನ ಅನುಸೂಚಿಯಲ್ಲಿ ನಿರ್ದಿಷ್ಟ ಪಡಿಸಿದ ಸಾರ್ವಜನಿಕ ಭಾಗವು ಸಾರ್ವಜನಿಕರ ಉಪಯೋಗಕ್ಕೆ ಅಗತ್ಯವಿಲ್ಲವೆಂದು ರಾಜ್ಯ ಸರ್ಕಾರಕ್ಕೆ ಕಂಡು ಬಂದಿರುವುದರಿಂದ, ಈಗ ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ 68 ನೇ ಪ್ರಕರಣದ (1) ನೇ ಉಪ ಪ್ರಕರಣದಿಂದ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರಕಾರವು ಸಾರ್ವಜನಿಕ ಭಾಗವು ಸಾರ್ವಜನಿಕರ ಉಪಯೋಗಕ್ಕೆ ಅಗತ್ಯವಿಲ್ಲವೆಂದು ಮತ್ತು ಸಾರ್ವಜನಿಕ ಭಾಗವು ಅಥವಾ ಅದರ ಮೇಲೆ ಸಾರ್ವಜನಿಕರ ಹಾಗೂ ಎಲ್ಲಾ ವ್ಯಕ್ತಿಗಳ ಹಕ್ಕುಗಳು ಕೊನೆಗೊಳ್ಳತಕ್ಕುದೆಂದು ಉದ್ದೇಶಿಸಿ ಈ ಮೂಲಕ ಘೋಷಿಸುತ್ತದೆ.

2. ಸಾರ್ವಜನಿಕ ಹಕ್ಕಿನ ಜೊತೆಗೆ ಸದರಿ ಭಾಗದಲ್ಲಿ ಅಥವಾ ಅದರ ಮೇಲೆ ಹಿತಾಸಕ್ತಿಯುಳ್ಳ ಅಥವಾ ಹಕ್ಕುಳ್ಳ ಅಥವಾ ಈ ಉದ್ದೇಶದಿಂದ ಪ್ರತಿಕೂಲ ಪರಿಣಾಮಕ್ಕೊಳಗಾಗುವ ಸಂಭವವಿರುವ ಇತರ ಯಾವುದೇ ಹಿತಾಸಕ್ತಿಯನ್ನು ಹೊಂದಿರುವ ಯಾವನೇ ಸಾರ್ವಜನಿಕನು ಅಥವಾ ಯಾವನೇ ವ್ಯಕ್ತಿಯು, ಈ ಅಧಿಸೂಚನೆಯನ್ನು ಹೊರಡಿಸಿದ ತೊಂಬತ್ತು ದಿನದೊಳಗೆ ಸದರಿ ಉದ್ದೇಶದ ಬಗ್ಗೆ ತನ್ನ ಆಕ್ಷೇಪಣೆಗಳನ್ನು, ಅಂಥ ಹಿತಾಸಕ್ತಿಯ ಅಥವಾ ಹಕ್ಕಿನ ಸ್ವರೂಪವನ್ನು ಮತ್ತು ಪ್ರತಿಕೂಲ ಪರಿಣಾಮವು ಸಂಭವಿಸಿರಬಹುದಾದ ರೀತಿಯನ್ನು ಮತ್ತು ಅಂಥ ಹಿತಾಸಕ್ತಿ ಅಥವಾ ಹಕ್ಕಿನ ಬಗ್ಗೆ ನಷ್ಟ ಪರಿಹಾರಕ್ಕಾಗಿ ಕ್ಷೇಮು ಮಾಡಲಾದ ಮೊಬಲಗು ಮತ್ತು ವಿವರಗಳನ್ನು ಜಿಲ್ಲೆಯ ಜಿಲ್ಲಾಧಿಕಾರಿಯವರಿಗೆ ಬರಹದಲ್ಲಿ ತಿಳಿಸತಕ್ಕದ್ದು ಮತ್ತು ಸದರಿ ಆಕ್ಷೇಪಣೆಗಳನ್ನು ಮತ್ತು ಕ್ಷೇಮುಗಳನ್ನು ಸದರಿ ಪ್ರಕರಣಗಳಲ್ಲಿ ಉಪಬಂಧಿಸಿರುವಂತೆ ಜಿಲ್ಲಾಧಿಕಾರಿಯವರು ಪರಿಶೀಲಿಸತಕ್ಕದ್ದು.

ಅನುಸೂಚಿ

ರಸ್ತೆಯ ಭಾಗ ಇತ್ಯಾದಿ ಇರುವ ಗ್ರಾಮ	ಹೊಸಕೆರೆಹಳ್ಳಿ ಗ್ರಾಮ
ತಾಲ್ಲೂಕು	ಬೆಂಗಳೂರು ದಕ್ಷಿಣ ತಾಲ್ಲೂಕು.
ಜಿಲ್ಲೆ	ಬೆಂಗಳೂರು ನಗರ ಜಿಲ್ಲೆ.
ರಸ್ತೆಯ ಮೊದಲಾದುದರ ಭಾಗ ಅಥವಾ ಭಾಗಗಳ ವರ್ಣನೆ	ಸ.ನಂ. 75/2, ಸರ್ಕಾರಿ ಖರಾಬು
ರಸ್ತೆಯ ಭಾಗ ಅಥವಾ ಭಾಗಗಳ ಸರಿ ಸುಮಾರು ವಿಸ್ತೀರ್ಣ	0-20 ಗುಂಟೆ
ಮೇರೆ	ಪೂರ್ವ: ರೀ.ಸ.ನಂ. 75/2ರಲ್ಲಿ ರಿಂಗ್ ರೋಡ್ ಪಶ್ಚಿಮ : ರೀ.ಸ.ನಂ. 75/1ರಲ್ಲಿ ಮೆ. ನಂದಿ ಎಕನಾಮಿಕ್ ಕಾರಿಡಾರ್ ಎಂಟರ್ ಪ್ರೈಸಸ್ ಲಿಮಿಟೆಡ್ ಉತ್ತರ: ರೀ. ಸ.ನಂ. 75/1 ದಕ್ಷಿಣ : ರೀ. ಸ.ನಂ. 75/2ರ ಉಳಿಕೆ.
ಸಾರ್ವಜನಿಕ ರಸ್ತೆ/ಬೀದಿ/ಗಲ್ಲಿ/ದಾರಿ ಅಥವಾ ಅದರ ಭಾಗ	0-20 ಗುಂಟೆ

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಹಾಂತಯ್ಯ ಎಸ್. ಹೊಸಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ
(ಭೂ ಮಂಜೂರಾತಿ-1)

ಕರ್ನಾಟಕ ಸರ್ಕಾರ

ಸಂಖ್ಯೆ:RD-LGB/311/2023
(E-1245565)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಡಾ.ಬಿ.ಆರ್. ಅಂಬೇಡ್ಕರ್ ವೀದಿ
ಬೆಂಗಳೂರು, ದಿನಾಂಕ:29.09.2025.

ತಿದ್ದುಪಡಿ

ಸರ್ಕಾರದ ಸಂಖ್ಯೆ: RD-LGB/311/2023 (E-1245565), ದಿನಾಂಕ: 10.09.2025ರನ್ವಯ ಹೊರಡಿಸಲಾಗಿರುವ ನಮೂನೆ-27ರ ಎರಡನೇ ಕಂಡಿಕೆಯಲ್ಲಿ ನಮೂದಿಸಿರುವ "ತೊಂಬತ್ತು ದಿನದೊಳಗೆ" ಎಂಬುದರ ಬದಲಾಗಿ "ಮೂವತ್ತು ದಿನದೊಳಗೆ" ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಹಾಂತಯ್ಯ ಎಸ್. ಹೊಸಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ
(ಭೂ ಮಂಜೂರಾತಿ-1)

PR-5695

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**

ಕರ್ನಾಟಕ ಸರ್ಕಾರ

ಸಂಖ್ಯೆ: ಆಇ 759 ವೆಚ್ಚ-12/2025
(ಇ-ಆಫೀಸ್ ಕಡತ)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ,
ಬೆಂಗಳೂರು, ದಿನಾಂಕ:11.11.2025

ಅಧಿಸೂಚನೆ

ಬೆಂಗಳೂರು ಮೈಸೂರು ಮೂಲಸೌಕರ್ಯ ಕಾರಿಡಾರ್ ಯೋಜನೆಯ Legal assessment ಅಧ್ಯಯನಕ್ಕಾಗಿ M/s Lexplexus Consulting, Advice & Litigation ಸಂಸ್ಥೆಯ ಸಮಾಲೋಚನ ಸೇವೆಯನ್ನು ಒಟ್ಟಾರೆ ರೂ.50,00,000/-ಗಳ ವೆಚ್ಚದಲ್ಲಿ ಪಡೆಯಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರ ಕಲಂ 4(ಜಿ)ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ, ಲೋಕೋಪಯೋಗಿ ಇಲಾಖೆಗೆ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಿದೆ.

ಉತ್ತಮ ಗುಣಮಟ್ಟದ ಸೇವೆಯನ್ನು ಸಮಂಜಸ ದರದಲ್ಲಿ ಸಂಗ್ರಹಿಸುವುದನ್ನು ಲೋಕೋಪಯೋಗಿ ಇಲಾಖೆಯು ದೃಢಪಡಿಸಿಕೊಳ್ಳುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕಾಂತಮ್ಮ ಎನ್.ಎಂ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸಂಗ್ರಹಣಾ ಕೋಶ)

PR-5696

ಕರ್ನಾಟಕ ಸರ್ಕಾರ

ಸಂಖ್ಯೆ:ಆಇ 872 ವೆಚ್ಚ-12/2025

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ
ಬೆಂಗಳೂರು, ದಿನಾಂಕ:13.11.2025.

ಅಧಿಸೂಚನೆ

ಅಕ್ಕ ಪತ್ತಿನ ಸಹಕಾರ ಸಂಘ ಸ್ಥಾಪನೆಗೆ ಪೂರಕವಾಗಿ ಕಾರ್ಯಸಾಧ್ಯತಾ ಅಧ್ಯಯನ (Feasibility Study) ಹಾಗೂ ವಿವರವಾದ ಯೋಜನಾ ವರದಿಯ (Detailed Project Report) ತಯಾರಿಕಾ ಕಾರ್ಯವನ್ನುತಾಂತ್ರಿಕ ಬೆಂಬಲ ಸಂಸ್ಥೆಯಾದ ಸ್ತ್ರೀನಿಧಿ ಕ್ರೆಡಿಟ್ ಕೋ-ಆಪರೇಟಿವ್ ಫೆಡರೇಶನ್, ತೆಲಂಗಾಣ ಇವರಿಂದ ಒಟ್ಟಾರೆ ರೂ.28,43,500/-ಗಳ ವೆಚ್ಚದಲ್ಲಿ ಪಡೆಯಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999 ರ ಕಲಂ 4(ಜಿ) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಗೆ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಿದೆ.

ಉತ್ತಮ ಗುಣಮಟ್ಟದ ಸೇವೆಯನ್ನು ಸಮಂಜಸ ದರದಲ್ಲಿ ಸಂಗ್ರಹಿಸುವುದನ್ನು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯು ದೃಢಪಡಿಸಿಕೊಳ್ಳುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕಾಂತಮ್ಮ ಎನ್.ಎಂ.)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸಂಗ್ರಹಣಾ ಕೋಶ)

PR-5697

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59.

THAMMAIAH